
MIT
MOODLAKATTE
INSTITUTE OF TECHNOLOGY
STUDENT INDUCTION PROGRAM
Don't Crawl
LEARN TO USE THEM TO
2021
MIT

▶ ಅಪರಾಧ ತಡೆ ಮಾಸಾಚರಣೆ

# ಸೈಬರ್ ಕ್ರೈಂ; ಜಾಗೃತಿ ಅತ್ಯಗತ್ಯ: ಎಸ್‌ಐ ನಿರಂಜನ್ ಗೌಡ

**ಕುಂದಾಪುರ, ಡಿ. 8:** ಅಪರಾಧ ತಡೆಗಟ್ಟುವಲ್ಲಿ ವಿದ್ಯಾರ್ಥಿಗಳ ಪಾತ್ರ ಬಹುಮುಖ್ಯವಾದದ್ದು ಕ್ಷಣ ಮಾತ್ರದಲ್ಲಿ ಆಗುವ ಅಹಿತಕರ ಘಟನೆಗಳ ಬಗ್ಗೆ ನಾವು ಎಚ್ಚೆತ್ತುಕೊಳ್ಳದೇ ಹೋದಲ್ಲಿ ಅದಕ್ಕೆ ತಕ್ಕ ಬೆಲೆ ತೆರಬೇಕಾಗುತ್ತದೆ. ಈ ದಿಸೆಯಲ್ಲಿ ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳ ದುರ್ಬಳಕೆ, ಸೈಬರ್ ಕ್ರೈಂಗಳ ಬಗ್ಗೆ ಜಾಗೃತಿ ಹೊಂದುವುದು ಅತೀ ಅವಶ್ಯಕ. ಅದಲ್ಲದೆ ವಿದ್ಯಾರ್ಥಿಗಳು ಸಂಚಾರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿ ಎಂದು ಕುಂದಾಪುರ ಗ್ರಾಮಾಂತರ (ಕಂಡ್ಲೂರು) ಠಾಣಾ ಪೊಲೀಸ್ ಉಪ ನಿರೀಕ್ಷಕ ನಿರಂಜನ್ ಗೌಡ ಬಿ.ಎಸ್. ಹೇಳಿದರು.

ಅವರು 'ಕುಂದಾಪುರದ ಮೂಡ್ಲಕಟ್ಟೆ ಎಂಜಿನಿಯರಿಂಗ್ ಕಾಲೇಜಿನಲ್ಲಿ ಎಂಜಿನಿಯರಿಂಗ್ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಕುಂದಾಪುರ ಗ್ರಾಮಾಂತರ (ಕಂಡ್ಲೂರು) ಪೊಲೀಸ್ ಠಾಣೆಯ ಸಹಯೋಗದೊಂದಿಗೆ ಆಯೋಜಿಸಿದ 'ಅಪರಾಧ ತಡೆ ಮಾಸಾಚರಣೆ -2021' ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದರು.




ಪ್ರಾಂಶುಪಾಲ ಡಾ। ಚಂದ್ರರಾವ್ ಮದಾನೆ ಮಾತನಾಡಿ, ಸಮಾಜದ ಕಾನೂನು ಪಾಲನೆಯಲ್ಲಿ ಪೊಲೀಸರ ಪಾತ್ರ ನಿಜವಾಗಿಯೂ ಶ್ಲಾಘನೀಯ. ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಅವರ ಜತೆ ಕೈಜೋಡಿಸಬೇಕಾದುದು ಅವಶ್ಯಕ ಎಂದು ಕಿವಿಮಾತು ಹೇಳಿದರು. ಉಪಪ್ರಾಂಶುಪಾಲರು, ಅಕಾಡೆಮಿಕ್ ಡೀನ್, ಸಿಬಂದಿ, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ವಿದ್ಯಾರ್ಥಿ ಪ್ರಥಮ್ ರಾಯ್ಕರ್ ಸ್ವಾಗತಿಸಿ, ಬೇಸಿಕ್ ಸೈನ್ಸ್ ವಿಭಾಗದ ಮುಖ್ಯಸ್ಥ ಪ್ರೊ। ದೀಪಕ್ ಶೆಟ್ಟಿ ವಂದಿಸಿದರು.